# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 515
2. ಸದಸ್ಯರ ಹೆಸರು : ಶ್ರೀ ಕೆ.ಸಿ.ಕೊಂಡಯ್ಯ
3. ಉತ್ತರಿಸಬೇಕಾದ ದಿನಾಂಕ : 16-09-2021

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಬೆಂಗಳೂರಿಗೆ ಕುಡಿಯುವ ನೀರು ಸರಬರಾಜು ಸಲುವಾಗಿ ಕೈಗೊಳ್ಳಲು ಉದ್ದೇಶಿಸಿರುವ ಮೇಕೆದಾಟು ಯೋಜನೆ ಪ್ರಸ್ತುತ ಯಾವ ಹಂತದಲ್ಲಿದೆ; | ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯನ್ನು ಕಾವೇರಿ ನದಿಗೆ ಅಡ್ಡಲಾಗಿ ಅರ್ಕಾವತಿ ಹಾಗೂ ಕಾವೇರಿ ನದಿಯ ಸಂಗಮದ ಸಮೀಪದಲ್ಲಿ ನಿರ್ಮಿಸಿ, 67.16 ಟಿ.ಎಂ.ಸಿ ನೀರನ್ನು ಶೇಖರಿಸಲು ರೂ.9000.00 ಕೋಟಿ ಮೊತ್ತದ ಡಿ.ಪಿ.ಆರ್. ತಯಾರಿಸಿ ದಿನಾಂಕ:18-01-2019 ರಂದು ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲಾಗಿದೆ. |
| ಆ | ಈ ಯೋಜನೆಗೆ ಎದುರಾದ ಸಮಸ್ಯೆಗಳೇನು; ಸಮಸ್ಯೆಗೆ ಪರಿಹಾರವನ್ನು ಕಂಡುಕೊಳ್ಳಲಾಗಿದೆಯೇ; | **ಸದರಿ ಯೋಜನೆಗೆ ಬೇಕಾದ ತೀರುವಳಿಗಳು :-**<br>i. ಸದರಿ ವಿವರವಾದ ಯೋಜನಾ ವರದಿಯು ಕೇಂದ್ರ ಜಲ ಆಯೋಗದ ವಿವಿಧ ನಿರ್ದೇಶನಾಲಯಗಳ ತೀರುವಳಿ ಅಗತ್ಯವಿರುತ್ತದೆ.<br>ii. ಕೇಂದ್ರ ಜಲ ಆಯೋಗ, ನವದೆಹಲಿ ರವರು ಸದರಿ ಯೋಜನೆಯ ಕುರಿತು Cauvery Water Management Authority ರವರ ಅಭಿಪ್ರಾಯ ಕೋರಿದೆ;<br>iii. ಯೋಜನೆಗೆ ಅವಶ್ಯವಿರುವ Environmental Impact Assessment (EIA) & Environmental Management Plan (EMP) ವರದಿಗಳನ್ನು ತಯಾರಿಸಲು Terms of Reference (ToR) ಅರ್ಜಿಗೆ ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆಯ ಸಚಿವಾಲಯದ (MoEF & CC) ಅನುಮೋದನೆ ನಿರೀಕ್ಷಿಸಲಾಗಿದೆ.<br>iv. ಪ್ರಸ್ತಾಪಿತ ಯೋಜನೆಗೆ ವನ್ಯಜೀವಿ, ಅರಣ್ಯ ಹಾಗೂ ಪರಿಸರದ ಶಾಸನಬದ್ಧ ತೀರುವಳಿಗಳ ಅವಶ್ಯವಿರುತ್ತದೆ.<br>v. ತಮಿಳುನಾಡು ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಿನಾಂಕ:30-11-2018 ರಂದು M.A. No.3127 of 2018 ಅನ್ನು ದಾಖಲಿಸಿದ್ದು, ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ.<br>vi. ಮಾನ್ಯ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ, ಪ್ರಧಾನ ಪೀಠ, ನವದೆಹಲಿ, ರವರ ದಿನಾಂಕ:17-06-2021 ರ ಆದೇಶವನ್ನು ಪ್ರಶ್ನಿಸಿ ತಮಿಳುನಾಡು ರಾಜ್ಯವು ದಿನಾಂಕ:11-08-2021 ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿರುತ್ತದೆ.<br>**ಸರ್ಕಾರದಿಂದ ಈ ಕೆಳಕಂಡ ಕ್ರಮ ಕೈಗೊಳ್ಳಲಾಗಿದೆ :**<br>• ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಜಲಸಂಪನ್ಮೂಲ ಸಚಿವರು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಯವರುಗಳಿಂದ ಮಾನ್ಯ ಕೇಂದ್ರ ಜಲ ಶಕ್ತಿ ಸಚಿವರು, ಮಾನ್ಯ ಕೇಂದ್ರ ಪರಿಸರ, |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| | | ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವರು ಹಾಗೂ ಕಾರ್ಯದರ್ಶಿಗಳು, ಕೇಂದ್ರ ಜಲ ಶಕ್ತಿ ಮಂತ್ರಾಲಯ, ಭಾರತ ಸರ್ಕಾರ ರವರಿಗೆ ಹಲವಾರು ಪತ್ರಗಳನ್ನು ಬರೆದು ಸದರಿ ಯೋಜನೆಗೆ ಅವಶ್ಯವಿರುವ ಕೇಂದ್ರದ ವಿವಿಧ ಇಲಾಖೆಗಳ ಅವಶ್ಯಕ ತೀರುವಳಿಗಳನ್ನು ತುರ್ತಾಗಿ ಒದಗಿಸಿಕೊಡುವಂತೆ ಕೋರಲಾಗಿದೆ.<br>• ಸಕ್ಷಮ ಪ್ರಾಧಿಕಾರಗಳ ಅನುಮೋದನೆಯನ್ನು ಪಡೆಯಲು ಅಗತ್ಯ ಕ್ರಮವಹಿಸಲಾಗುತ್ತಿದೆ. |
| ಇ | ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು; ಹಾಗೂ ಎಷ್ಟು ಪ್ರಮಾಣದ ನೀರನ್ನು ಬೆಂಗಳೂರು ನಗರಕ್ಕೆ ಸಂಗ್ರಹಿಸಿ ಒದಗಿಸಲಾಗುವುದು; | ಸದರಿ ಯೋಜನೆಯ ವಿವರವಾದ ವರದಿಗೆ ಕೇಂದ್ರ ಜಲ ಆಯೋಗ ಹಾಗೂ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯದ ಅವಶ್ಯಕ ತೀರುವಳಿಗಳನ್ನು ಪಡೆದ ನಂತರ ಕಾಲಮಿತಿಯನ್ನು ನಿಗದಿಪಡಿಸಿ, ಕಾಮಗಾರಿಯನ್ನು ಪ್ರಾರಂಭಿಸುವ ಕುರಿತು ಪರಿಶೀಲಿಸಲಾಗುವುದು.<br>ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯದ ದಿನಾಂಕ:16-02-2018 ರ ಆದೇಶದಲ್ಲಿ 4.75 ಟಿ.ಎಂ.ಸಿ (Consumptive use) ಪ್ರಮಾಣವನ್ನು ಕುಡಿಯುವ ನೀರಿಗಾಗಿ ಹಂಚಿಕೆ ಮಾಡಿದ್ದು, ಬೆಂಗಳೂರು ನಗರ ಹಾಗೂ ಸುತ್ತಮುತ್ತಲ ಪ್ರದೇಶಗಳಿಗೆ ಕುಡಿಯುವ ನೀರನ್ನು ಒದಗಿಸಲು ಸದರಿ ಪ್ರಸ್ತಾವನೆಯಲ್ಲಿ ಅನುವು ಮಾಡಲಾಗಿದೆ. |
| ಈ | ಯೋಜನಾ ವೆಚ್ಚದ ವಿವರಗಳನ್ನು ಒದಗಿಸುವುದು? | |

*ಸಂಖ್ಯೆ:ಜಸಂಇ 139 ಎಸ್‌ಎಲ್‌ಎ 2021*

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು